ಅ) ಅಸಂಪ್ರದಾಯ ಇಂಧನ ಮೂಲಗಳಿಂದ ವಿದ್ಯುತ್ ಉತ್ಪಾದನೆ ಮಾಡುವ ಬಗ್ಗೆ ಗಮನವನ್ನು ಹರಿಸಲಾಗುತ್ತಿದೆ.

ಇ) ಕರ್ನಾಟಕ ವಿದ್ಯುತ್ ನಿಗಮ, ಕಪ್ಪದ ಗುಡ್ಡದಲ್ಲಿ ಒಂದು ಗಾಳಿಯಂತ್ರ ವಿದ್ಯುತ್ ಉತ್ಪಾದನಾ ಕೇಂದ್ರವನ್ನು ಸ್ಥಾಪಿಸಿದ್ದು ಸುಮಾರು 2 ಮೆ.ವಾ. ವಿದ್ಯುತ್ ಉತ್ಪಾದನೆಯನ್ನು ನವೆಂಬರ್ 95 ರಿಂದ ಮಾಡುತ್ತಿದೆ.

ಹೊಸದಾಗಿ ಆಸ್ಪತ್ರೆಗಳನ್ನು ಪ್ರಾರಂಭಿಸುವುದು

305 - ಶ್ರೀ ಜೆ.ಟಿ. ಪಾಟೀಲ್ (ಬೀಳಗಿ) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 1995-96ನೇ ಸಾಲಿನಲ್ಲಿ ರಾಜ್ಯದಲ್ಲಿ ಹೊಸದಾಗಿ ಎಷ್ಟು ಆಸ್ಪತ್ರೆಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗುತ್ತಿರುತ್ತದೆ; (ಜಿಲ್ಲಾವಾರು ವಿವರ ನೀಡುವುದು)

ಆ) ಇನ್ನು ಅನುಮತಿ ಕೊಟ್ಟಿರದಿದ್ದಲ್ಲಿ ಹೊಸದಾಗಿ ಆಸ್ಪತ್ರೆ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಇ) ಬೀಳಗಿ ಮತ ಕ್ಷೇತ್ರದಲ್ಲಿ ಕಡಿಮೆ ಆಸ್ಪತ್ರೆಗಳಿದ್ದು ಆ ಮತ ಕ್ಷೇತ್ರಕ್ಕೆ ಹೆಚ್ಚಿನ ಆಸ್ಪತ್ರೆಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಬಿ.ಎನ್. ಬಚ್ಚೇಗೌಡ (ಪಶುಸಂಗೋಪನಾ ಸಚಿವರು) :

ಅ) 1995-96ನೇ ಸಾಲಿನಲ್ಲಿ ರಾಜ್ಯದಲ್ಲಿ ಯಾವುದೇ ಹೊಸ ಪಶು ವೈದ್ಯಕೀಯ ಆಸ್ಪತ್ರೆಗಳನ್ನು ಪ್ರಾರಂಭಿಸಲು ಅನುಮತಿ ನೀಡಿರುವುದಿಲ್ಲ.

ಆ) ಇಲ್ಲ

ಇ) 1996-97ನೇ ಸಾಲಿನಲ್ಲಿ ಆದ್ಯತೆಯ ಮೇಲೆ ಪರಿಗಣಿಸಲಾಗುವುದು.

ದನಗಳ ಜಾತ್ರೆ ಕುರಿತು

609 - ಶ್ರೀ ಕೆ.ಎಸ್. ಪುಟ್ಟಣ್ಣಯ್ಯ (ಪಾಂಡವಪುರ) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ 300ಕ್ಕ ಹೆಚ್ಚು ದನಗಳ ಜಾತ್ರೆ ನಡೆಯುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಜಾತ್ರೆಗಳಲ್ಲಿ ಆಯ್ಕೆಯಾದ ದನಗಳಿಗೆ ಬಹುಮಾನ ಕೊಡಲು ಹೆಚ್ಚು ಹಣವನ್ನು ಬಿಡುಗಡೆ ಮಾಡಲು ಸರ್ಕಾರವನ್ನು ಕೋರಿಯವುದು ನಿಜವಲ್ಲವೇ?

ಇ) ಹಾಗಿದ್ದಲ್ಲಿ ಹೆಚ್ಚಿನ ಮಟ್ಟದಲ್ಲಿ ಹಣವನ್ನು ಬಿಡುಗಡೆ ಮಾಡದೇ ಇರಲು ಕಾರಣಗಳೇನು?

ಶ್ರೀ ಬಿ.ಎನ್. ಬಚ್ಚೇಗೌಡ (ಪಶುಸಂಗೋಪನಾ ಸಚಿವರು) :

ಅ) ರಾಜ್ಯದಲ್ಲಿ 206 ದನಗಳ ಜಾತ್ರೆ ನಡೆಯುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಈ ವಿಚಾರವು ಸರ್ಕಾರದ ಪರಿಶೀಲನೆಯಲ್ಲಿದೆ

ಇ) ಉದ್ಭವಿಸುವುದಿಲ್ಲ.